## 7. ಸರ್ಕಾರದಿಂದ 535 ಎಕರೆ ಕೆರೆ ಜಾಗ ಒತ್ತುವರಿ

ಬಿಬಿಎಂಪಿ ವ್ಯಾಪ್ತಿಯ ಕೆರೆಗಳಲ್ಲಿ ಸರ್ಕಾರಿ ಹಾಗೂ ಖಾಸಗಿ ಒತ್ತುವರಿ ವಿವರವನ್ನು ಬಿಬಿಎಂಪಿ ಬಹಿರಂಗಪಡಿಸಿದ್ದು, ಬರೋಬ್ಬರಿ 847.31ಎಕರೆ ಕೆರೆ ಪ್ರದೇಶ ಒತ್ತುವರಿಯಗಿದೆ ಎಂಬ ಆಘಾತಕಾರಿ ಅಂಶ ಬೆಳಕಿಗೆ ಬಂದಿದೆ.

ಒಂದು ಕಾಲದಲ್ಲಿ ಬೆಂಗಳೂರನ್ನು ಕೆರೆಗಳ ನಗರ ಎಂದು ಕರೆಯಲಾಗುತ್ತಿತ್ತು. ಆದರೆ, ಬೆಂಗಳೂರು ನಗರ ಬೆಳೆದಂತೆ ಅನೇಕ ಕೆರೆಗಳು ಬಡಾವಣೆ, ಬಸ್ ನಿಲ್ದಾಣ, ಸ್ಟೇಡಿಯಂ ಸೇರಿದಂತೆ ಇನ್ನಿತರ ಕಾರ್ಯಕ್ಕೆ ಒತ್ತುವರಿ ಮಾಡಿಕೊಳ್ಳಲಾಗಿದೆ. ಇಂದಿಗೂ ಒತ್ತುವರಿ ಮುಂದುವರೆದಿದ್ದು, ಬಿಬಿಎಂಪಿ ವ್ಯಾಪ್ತಿಯ ಕೆರೆಗಳ ಪೈಕಿ 160 ಕೆರೆಗಳ ಒತ್ತುವರಿ ಕುರಿತು ಭೂ ದಾಖಲೆಗಳ ಸಹಾಯಕ ನಿರ್ದೇಶಕರು ದೃಢೀಕರಿಸಿ ಕೆರೆ ನಕ್ಷೆ ಹಾಗೂ ಒತ್ತುವರಿ ವಿವರವನ್ನು ಬಿಬಿಎಂಪಿ ವೆಬ್‌ಸೈಟ್‌ನಲ್ಲಿ ಬಿಡುಗಡೆ ಮಾಡಿರುತ್ತಾರೆ.

ಸರ್ವೇ ಪೂರ್ಣಗೊಂಡ ಕೆರೆಗಳಲ್ಲಿ ಕೆಲವು ಕೆರೆಗಳಲ್ಲಿ ಅಷ್ಟೋ ಇಷ್ಟೋ ಒತ್ತುವರಿಯಾಗಿದೆ. ಕೆಲವು ಕೆರೆಗಳಲ್ಲಿ ಯಾವುದೇ ಒತ್ತುವರಿ ಆಗಿಲ್ಲ ಮತ್ತು ಕೆಲವು ಕೆರೆಗಳು ಸಂಪೂರ್ಣ ಮಾಯವಾಗಿರುವ ಬಗ್ಗೆ ಅಂಕಿ ಅಂಶದಲ್ಲಿ ತಿಳಿಸಲಾಗಿದೆ. ಸರ್ಕಾರದ ವಿವಿಧ ಇಲಾಖೆಗಳಾದ ರೈಲ್ವೆ, ಬಿಎಂಟಿಸಿ, ಅಂಗನವಾಡಿ, ಶಾಲೆ-ಕಾಲೇಜು, ಬಿಡಿಎ, ಜಲಮಂಡಳಿ, ಲೋಕೋಪಯೋಗಿ ಇಲಾಖೆ, ಸ್ವತಃ ಬಿಬಿಎಂಪಿ ಸೇರಿದಂತೆ ವಿವಿಧ ಇಲಾಖೆಗಳು ಒಟ್ಟು 535.21 ಎಕರೆ ಕೆರೆ ಪ್ರದೇಶಗಳನ್ನು ಒತ್ತುವರಿ ಮಾಡಿ ರಸ್ತೆ, ಪಾರ್ಕ್ ಕಟ್ಟಡ, ರಿಂಗ್ ರಸ್ತೆ ಸೇರಿದಂತೆ ವಿವಿಧ ಉದ್ದೇಶಗಳಿಗೆ ಬಳಕೆ ಮಾಡಿಕೊಳ್ಳಲಾಗಿದೆ. ಇನ್ನು 249.30 ಎಕರೆ ಪ್ರದೇಶವನ್ನು ಖಾಸಗಿ ವ್ಯಕ್ತಿಗಳು ಕೃಷಿ, ಕಟ್ಟಡ, ಶೆಡ್. ಅಪಾರ್ಟ್‌ಮೆಂಟ್, ದೇವಸ್ಥಾನ, ಮಸೀದಿ, ಚರ್ಚ್, ಖಾಸಗಿ ರಸ್ತೆ, ಖಾಸಗಿ ಶಾಲಾ, ಕಾಲೇಜುಗಳಿಗೆ ಒತ್ತುವರಿ ಮಾಡಿಕೊಳ್ಳಲಾಗಿದೆ ಎಂದು ಉಲ್ಲೇಖಿಸಿದೆ.

**11 ಕೆರೆಗಳ ಒತ್ತುವರಿ ಇಲ್ಲ:** ಗುಂಜೂರು ಕೆರೆ 9.17 ಎಕರೆ, ಪನತೂರು ಕೆರೆ 6.30 ಎಕರೆ, ಗುಂಜೂರು ಪಾಳ್ಯ ಕೆರೆ 36.27 ಎಕರೆ, ಕಮ್ಮಗೊಂಡನಹಳ್ಳಿ ಕೆರೆ 23.10 ಎಕರೆ, ನಾಗರಬಾವಿ ಕೆರೆ 4.7 ಎಕರೆ, ಬೆಟ್ಟಹಳ್ಳಿ ಕೆರೆ 1.32 ಎಕರೆ, ಭೀಮನಕಟ್ಟೆಕೆರೆ 1.23 ಎಕರೆ, ಕೆಂಚನಪುರ ಕೆರೆ 17.26 ಎಕರೆ, ಗೊಟ್ಟಿಗೆರೆಪಾಳ್ಯ ಕೆರೆ 17.38 ಎಕರೆ, ಬೆಳ್ಳಹಳ್ಳಿ ಕೆರೆ 18.32 ಎಕರೆ ಸೇರಿದಂತೆ ಒಟ್ಟು 11 ಕೆರೆಗಳಲ್ಲಿ ಯಾವುದೇ ಒತ್ತುವರಿ ಆಗಿಲ್ಲ ಎಂದು ಹೇಳಿದೆ.

**ಮಾಯವಾದ ಕೆರೆಗಳು:** ಬಸಪ್ಪನಕಟ್ಟೆ ಕೆರೆ ಹಾಗೂ ಅಂಬುಲಿ ಕೆಳಗಿನ ಕೆರೆ ಸಂಪೂರ್ಣವಾಗಿ ಒತ್ತುವರಿ ಆಗಿವೆ. ದಾಸರಹಳ್ಳಿ ವಲಯದ ಯಶವಂತಪುರ ಹೋಬಳಿ ವ್ಯಾಪ್ತಿಯ ಲಗ್ಗೆರೆಯ 4.11 ಎಕರೆಯ ಬಸಪ್ಪನಕಟ್ಟೆ ಕೆರೆಯಲ್ಲಿ ಖಾಸಗಿಯಿಂದ 0.19 ಗುಂಟೆ, ಸರ್ಕಾರದ ವಿವಿಧ ಇಲಾಖೆಯಿಂದ 3.32 ಎಕರೆ ಒತ್ತುವರಿ ಆಗಿದೆ. ಈ ಮೂಲಕ ಕೆರೆ ದಾಖಲೆಗಳಲ್ಲಿ ಮಾತ್ರ ಉಳಿದಿದ್ದು, ವಾಸ್ತವವಾಗಿ ಕಾಣೆಯಾಗಿದೆ. ಕೆರೆ ಜಾಗದಲ್ಲಿ ಈಗ ಬಿಬಿಎಂಪಿ 2 ಎಕರೆ ಪ್ರದೇಶದಲ್ಲಿ ಪಾರ್ಕ್ ನಿರ್ಮಾಣ ಮಾಡಿದೆ. 1 ಎಕರೆಯಲ್ಲಿ ಆಟದ ಮೈದಾನ, 14 ಗುಂಟೆಯಲ್ಲಿ ರಸ್ತೆ, ಸರ್ಕಾರಿ ಶಾಲೆ ಮತ್ತು ದೇವಸ್ಥಾನ ಹಾಗೂ ಒತ್ತುವರಿದಾರರು ಮನೆಗಳನ್ನು ನಿರ್ಮಿಸಿಕೊಂಡಿದ್ದಾರೆ. ಇನ್ನು ಮಹದೇವಪುರ ವಲಯದ ಅಂಬುಲಿಪುರದ 4.09 ಎಕರೆ ಸಂಪೂರ್ಣವಾಗಿ ಒತ್ತುವರಿ ಆಗಿದೆ. ಈ ಕೆರೆಯನ್ನು ಕಾಪಾಡುವ ಜವಾಬ್ದಾರಿ ಹೊತ್ತಿರುವ ಸ್ವತಃ ಬಿಬಿಎಂಪಿಯೇ ಒತ್ತುವರಿ ಮಾಡಿದೆ. ಒತ್ತುವರಿ ಮಾಡಿದ 4.09 ಪ್ರದೇಶದಲ್ಲಿ ಉದ್ಯಾನವನ ನಿರ್ಮಿಸಿದೆ ಎಂದು ಭೂ ದಾಖಲೆಗಳ ಸಹಾಯಕ ನಿರ್ದೇಶಕರು ದೃಢೀಕರಿಸಿದ್ದಾರೆ.

ಆಧಾರ:ಕನ್ನಡಪ್ರಭ, ದಿನಾಂಕ:22.07.2020